**Bangalore**
**Regional News**
**24.09.2026 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ತಮಿಳುನಾಡಿಗೆ ೪ ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಸಿಡಬ್ಲ್ಯೂಆರ್‌ಸಿ ಶಿಫಾರಸು; ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಸರ್ಕಾರ ನಿರ್ಧಾರ
2. ಉಭಯ ಸದನಗಳಲ್ಲಿ ಬರ ಕುರಿತಂತೆ ಚರ್ಚೆ; ವೈಜ್ಞಾನಿಕ ರೀತಿಯಲ್ಲಿ ಮೋಡ ಬಿತ್ತನೆ ಮಾಡುವಂತೆ ಸದಸ್ಯ ಎಚ್.ಕೆ. ಪಾಟೀಲ್ ಸಲಹೆ
3. ಭದ್ರಾ ಮೇಲ್ದಂಡೆ ಯೋಜನೆಯ ನೀರನ್ನು ೨೦೨೮ರ ವೇಳೆಗೆ ಚಿತ್ರದುರ್ಗ ಜಿಲ್ಲೆಗೆ ಹರಿಸಲು ನಿರ್ಧಾರ - ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
4. ರಾಜ್ಯದಲ್ಲಿ ಪರಿಶಿಷ್ಟ ಆಯೋಗಗಳನ್ನು ಪ್ರತ್ಯೇಕವಾಗಿ ಸ್ಥಾಪಿಸಲು ರಾಷ್ಟ್ರೀಯ ಪರಿಶಿಷ್ಟ ಪಂಗಡಗಳ ಆಯೋಗ ಶಿಫಾರಸ್ಸು
5. ಶಿವಮೊಗ್ಗದಲ್ಲಿ ನಾಳೆ ಹಿಂದೂ ಮಹಾಸಭಾ ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆ; ಜಿಲ್ಲೆಯಲ್ಲಿ ಬಿಗಿ ಭದ್ರತೆ

<><><><>

ರಾಜ್ಯದಲ್ಲಿ ಭೀಕರ ಬರಗಾಲವಿದ್ದರೂ ಮುಂದಿನ ೧೫ ದಿನಗಳ ಕಾಲ ತಮಿಳುನಾಡಿಗೆ ನಿತ್ಯ ೪ ಸಾವಿರ ಕ್ಯೂಸೆಕ್ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣಾ ಸಮಿತಿ ಶಿಫಾರಸ್ಸು ಮಾಡಿದೆ. ಈ ನಡುವೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶ ಪಾಲಿಸುವಂತೆ ರಾಜ್ಯಕ್ಕೆ ಸುಪ್ರೀಂಕೋರ್ಟ್ ಸೂಚಿಸಿದೆ. ತಮಿಳುನಾಡಿನ ಆಕ್ಷೇಪಣೆಗೆ ಅಫಿಡವಿಟ್ ಸಲ್ಲಿಸಲು ಒಂದು ವಾರ ಕಾಲಾವಕಾಶ ನೀಡಿದೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆ ಅಭಾವದಿಂದ ಜಲಾಶಯಗಳಿಗೆ ಒಳಹರಿವು ಸ್ಥಗಿತಗೊಂಡಿದ್ದು, ಸಿಡಬ್ಲ್ಯೂಆರ್‌ಸಿ ಆದೇಶ ಪ್ರಶ್ನಿಸಿ, ಸುಪ್ರೀಂಕೋರ್ಟ್ ಹಾಗೂ ಪ್ರಾಧಿಕಾರಕ್ಕೆ ಶೀಘ್ರವೇ ಮೇಲ್ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ. ರಾಜ್ಯವು ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿರುವಾಗ ತಮಿಳುನಾಡಿಗೆ ನೀರು ಬಿಡುಗಡೆ ಕಷ್ಟಸಾಧ್ಯ ಎಂದು ಹೇಳಿದ್ದಾರೆ.

<><><><>

ವಿಧಾನಮಂಡಲದ ಉಭಯ ಸದನಗಳ ಅಧಿವೇಶನದಲ್ಲಿಂದು ರಾಜ್ಯದಲ್ಲಿನ ಬರಪರಿಸ್ಥಿತಿ ಕುರಿತಂತೆ ಗಂಭೀರ ಚರ್ಚೆ ನಡೆಯಿತು. ಕಾಂಗ್ರೆಸ್ ಹಿರಿಯ ಸದಸ್ಯ ಎಚ್.ಕೆ. ಪಾಟೀಲ್ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿ, ಗದಗ ಜಿಲ್ಲೆಯ ಬರಪರಿಸ್ಥಿತಿಯನ್ನು ಸದನದಲ್ಲಿ ಎಳೆಎಳೆಯಾಗಿ ಬಿಚ್ಚಿಟ್ಟರು. ಬರಪರಿಸ್ಥಿತಿ ಸಂದರ್ಭದಲ್ಲಿ ವೈಜ್ಞಾನಿಕ ರೀತಿಯಲ್ಲಿ ಮೋಡಬಿತ್ತನೆ ಮಾಡುವುದು ಅಗತ್ಯವಾಗಿದೆ ಎಂದ ಅವರು, ತಂತ್ರಜ್ಞಾನವನ್ನು ಟೀಕಿಸುವುದು ಸರಿಯಲ್ಲ ಎಂದು ತಿಳಿಸಿದರು. ಜೆಡಿಎಸ್ ಸದಸ್ಯ ಸುರೇಶ್ ಬಾಬು ಮಾತನಾಡಿ, ಬರ ಹಿನ್ನೆಲೆಯಲ್ಲಿ ವಿದ್ಯುತ್ ಕಡಿತ ಮಾಡುವುದನ್ನು ತಪ್ಪಿಸಬೇಕು ಎಂದು ಸರ್ಕಾರಕ್ಕೆ ಸಲಹೆ ನೀಡಿದರು. ಈ ವೇಳೆ ಮಧ್ಯ ಪ್ರವೇಶಿಸಿದ ಇಂಧನ ಸಚಿವ ಕೆ.ಜೆ. ಜಾರ್ಜ್, ಕೇಂದ್ರ ಸರ್ಕಾರದ ಕುಸುಮ್ ಬಿ ಹಾಗೂ ರಾಜ್ಯ ಸರ್ಕಾರದ ಕುಸುಮ್ ಸಿ ಮೂಲಕ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡಲು ಉತ್ತೇಜನ ನೀಡಲಾಗುತ್ತಿದೆ ಎಂದು ಹೇಳಿದರು. ಪರಿಷತ್‌ನಲ್ಲಿಯೂ ಬರ ಕುರಿತಂತೆ ಚರ್ಚೆ ನಡೆದಿದ್ದು, ಕಾಂಗ್ರೆಸ್ ಸದಸ್ಯ ರವಿ, ಹೈನುಗಾರಿಕೆ ಕ್ಷೇತ್ರ ಎದುರಿಸುತ್ತಿರುವ ಸಮಸ್ಯೆಯನ್ನು ಪ್ರಸ್ತಾಪಿಸಿದರು. ಹಾಲಿನ ಖರೀದಿ ದರ ಹೆಚ್ಚಿಸುವ ಅಗತ್ಯವಿದೆ ಎಂದು ಸರ್ಕಾರವನ್ನು ಒತ್ತಾಯಿಸಿದರು.

<><><><>

ಸಿರಿಗೆರೆ ತರಳಬಾಳು ಮಠವು ಶಿಕ್ಷಣ ಹಾಗೂ ನೀರಾವರಿ ಕ್ಷೇತ್ರಗಳಿಗೆ ನೀಡುತ್ತಿರುವ ಕೊಡುಗೆ ಅಪಾರ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಚಿತ್ರದುರ್ಗದ ಸಿರಿಗೆರೆಯಲ್ಲಿ ನಡೆದ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳ ೩೫ನೇ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ 'ತರಳಬಾಳು ಹುಣ್ಣಿಮೆ ಸ್ಮರಣ ಸಂಚಿಕೆ' ಬಿಡುಗಡೆ ಮಾತನಾಡಿದ ಅವರು, ದೇಶದಲ್ಲಿ ನ್ಯಾಯಾಲಯಗಳೇ ಇಲ್ಲದ ಕಾಲದಲ್ಲೂ ಜನರಿಗೆ ನ್ಯಾಯ ಒದಗಿಸಿದ ಈ ಧರ್ಮಪೀಠವು, ಇಂದು ಮಠದ ಶೈಕ್ಷಣಿಕ ಸಂಸ್ಥೆಗಳ ಮೂಲಕ ಲಕ್ಷಾಂತರ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿದೆ ಎಂದು ಶ್ಲಾಘಿಸಿದ್ದಾರೆ. ಬಯಲುಸೀಮೆ ಭಾಗದ ಜನರ ನೀರಾವರಿ ಕನಸನ್ನು ನನಸು ಮಾಡಲು ಸರ್ಕಾರ ಶ್ರಮಿಸುತ್ತಿದ್ದು, ೨೦೨೮ರ ವೇಳೆಗೆ ಭದ್ರಾ ಮೇಲ್ದಂಡೆ ಯೋಜನೆಯ ನೀರನ್ನು ಜಿಲ್ಲೆಗೆ ಹರಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಚಿವರು, ಶಾಸಕರು ಹಾಗೂ ಮಠದ ಅಪಾರ ಸಂಖ್ಯೆಯ ಭಕ್ತರು ಉಪಸ್ಥಿತರಿದ್ದರು.

<><><><>

ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರ ಕಲ್ಯಾಣ ಕಾರ್ಯಕ್ರಮಗಳ ಜಾರಿ ಹಾಗೂ ಸಮಸ್ಯೆಗಳಿಗೆ ಸ್ಪಂದಿಸುವ ಆಯೋಗಗಳನ್ನು ಪ್ರತ್ಯೇಕವಾಗಿ ಸ್ಥಾಪಿಸುವ ಅಗತ್ಯವಿದೆ ಎಂದು ರಾಷ್ಟ್ರೀಯ ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷ ಅಂತರ್ ಸಿಂಗ್ ಆರ್ಯ ತಿಳಿಸಿದ್ದಾರೆ. ರಾಜ್ಯದಲ್ಲಿ ಪರಿಶಿಷ್ಟ ಪಂಗಡಗಳ ಸಮುದಾಯದವರ ಅಭಿವೃದ್ಧಿಗಾಗಿ ವಿವಿಧ ಕಾರ್ಯಕ್ರಮಗಳ ಅನುಷ್ಠಾನ ಕುರಿತು ಪ್ರಗತಿ ಪರಿಶೀಲನಾ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಮಾದರಿಯಲ್ಲಿ ಎರಡೂ ಆಯೋಗಗಳನ್ನು ಪ್ರತ್ಯೇಕವಾಗಿ ಸ್ಥಾಪಿಸಲು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ ಎಂದು ಹೇಳಿದ್ದಾರೆ. ತುರ್ತಾಗಿ ಪರಿಶಿಷ್ಟ ಪಂಗಡಗಳ ಪ್ರತ್ಯೇಕ ಆಯೋಗ ರಚಿಸಲು ಕ್ರಮಕೈಗೊಳ್ಳುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಗಮನಕ್ಕೆ ತರಲಾಗಿದೆ ಎಂದು ಹೇಳಿದ್ದಾರೆ. ಕಸ್ತೂರಿ ರಂಗನ್ ವರದಿ ಜಾರಿಗೆ ಸಂಬಂಧಿಸಿದಂತೆ ಅಲ್ಲಿನ ಪರಿಶಿಷ್ಟ ಪಂಗಡಗಳ ಜನರ ಸಮಸ್ಯೆಗಳನ್ನು ಆಲಿಸಲು ಆ ಭಾಗಕ್ಕೆ ಭೇಟಿ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯ ಸರ್ಕಾರ ಗಂಭೀರ ಆರ್ಥಿಕ ಬಿಕ್ಕಟ್ಟನ್ನು ಎದುರಿಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ರಾಜ್ಯದ ಆರ್ಥಿಕ ಸ್ಥಿತಿಗತಿಯ ಬಗ್ಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ದೂರಿದ್ದಾರೆ. ರಾಜ್ಯದ ಆರ್ಥಿಕ ಸ್ಥಿತಿಯನ್ನು ಎತ್ತಿ ತೋರಿಸುವ ಹಣಕಾಸು ಇಲಾಖೆಯ ಇತ್ತೀಚಿನ ಪತ್ರ ಕೇವಲ ಸಾಮಾನ್ಯ ಆಡಳಿತಾತ್ಮಕ ಸಂವಹನವಲ್ಲ, ಬದಲಾಗಿ ಸರ್ಕಾರದ ಹದಗೆಡುತ್ತಿರುವ ಆರ್ಥಿಕ ಸ್ಥಿತಿಯ ಪ್ರತಿಬಿಂಬವಾಗಿದೆ ಎಂದು ಹೇಳಿದ್ದಾರೆ. ಸರ್ಕಾರ ವೇತನ ಪಾವತಿಸಲು, ಪಿಂಚಣಿ ಬಿಡುಗಡೆ ಮಾಡಲು ಮತ್ತು ಹೆಚ್ಚುತ್ತಿರುವ ಆರ್ಥಿಕ ಹೊಣೆಗಾರಿಕೆಗಳನ್ನು ಪೂರೈಸಲು ಪರದಾಡುತ್ತಿದೆ ಎಂದು ಆರೋಪಿಸಿದ್ದಾರೆ.

<><><><>

ಶಿವಮೊಗ್ಗದಲ್ಲಿ ನಾಳೆ ಪ್ರಸಿದ್ಧ ಹಿಂದೂ ಮಹಾಸಭಾ ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ ನಗರದಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಬಿ. ಮಾಹಿತಿ ನೀಡಿದ್ದಾರೆ. ಮೆರವಣಿಗೆಯು ಶಾಂತಿಯುತವಾಗಿ ನಡೆಯಲು ಪೊಲೀಸ್ ಇಲಾಖೆಯೊಂದಿಗೆ ಸಾರ್ವಜನಿಕರು ಹಾಗೂ ಸಂಘಟಕರು ಸಂಪೂರ್ಣ ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ. ಬಂದೋಬಸ್ತ್‌ಗಾಗಿ ಮೂರು ಸಾವಿರಕ್ಕೂ ಅಧಿಕ ಪೊಲೀಸ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಮೆರವಣಿಗೆ ಸಾಗುವ ಮಾರ್ಗದಲ್ಲಿ ನಿಗಾವಹಿಸಲು ೩

ಸಾವಿರದ ೫೦೦ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮರಾಗಳನ್ನು ಹಾಗೂ ೧೨ ಹೈಟೆಕ್ ಡ್ರೋನ್ ಕ್ಯಾಮರಾಗಳನ್ನು ಬಳಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ 'ಸೇವಾ ಸಂಕಲ್ಪ ಅಭಿಯಾನ' ನಡೆಯುತ್ತಿದೆ.  ಅದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಭಾರತದ ಸೌರ ಕ್ರಾಂತಿ ಕುರಿತು ಒಂದು ನೋಟ ಇಲ್ಲಿದೆ. 'ಪಿಎಂ-ಕುಸುಮ್' ಯೋಜನೆಯ ಮೂಲಕ ರೈತರ ನೀರಾವರಿ ಪಂಪ್‌ಸೆಟ್‌ಗಳಿಗೆ ಸೌರಶಕ್ತಿ ಅಳವಡಿಸಿ ಡೀಸೆಲ್ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲಾಗುತ್ತಿದೆ. ತುಮಕೂರಿನ ಅಜ್ಜಪ್ಪನಹಳ್ಳಿಯ ರೈತ ಭೀಮಯ್ಯ, ಪಿಎಂ-ಕುಸುಮ್ ಯೋಜನೆಯ ಫಲಾನುಭವಿಯಾಗಿದ್ದು, ತಮ್ಮ ಜಮೀನಿನಲ್ಲಿ ನೀರಾವರಿ ಪಂಪ್ ಅಳವಡಿಸಿಕೊಂಡಿರುವುದರಿಂದ ಕೃಷಿ ಚಟುವಟಿಕೆಗಳಿಗೆ ಹೆಚ್ಚಿನ ಅನುಕೂಲವಾಗಿದೆ ಎಂದು ತಿಳಿಸಿದ್ದಾರೆ.  ಸೌರ ಶಕ್ತಿಯನ್ನು ಬಳಸುವುದರಿಂದ ನೀರಾವರಿ ವೆಚ್ಚದಲ್ಲಿ ಉಳಿತಾಯವಾಗಿದ್ದು, ಕೃಷಿ ಕಾರ್ಯಗಳನ್ನು ಹೆಚ್ಚು ಯೋಜಿತವಾಗಿ ನಿರ್ವಹಿಸಲು ಸಾಧ್ಯವಾಗಿದೆ ಎಂದು ಆಕಾಶವಾಣಿಯೊಂದಿಗೆ ತಮ್ಮ ಅನುಭವ ಹಂಚಿಕೊಂಡಿದ್ದಾರೆ.

***ಧ್ವನಿ**** ಭೀಮಯ್ಯ, ರೈತ

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹಾಡೋನಹಳ್ಳಿ, ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ರಾಷ್ಟ್ರೀಯ ಪೋಷಣ ಮಾಸಾಚರಣೆ-೨೦೨೬' ಕಾರ್ಯಕ್ರಮವನ್ನು ದೊಡ್ಡಬಳ್ಳಾಪುರ ತಾಲೂಕಿನ ಕೊಟ್ಟಿಗೆ ಮಾಚೇನಹಳ್ಳಿ ಗ್ರಾಮದಲ್ಲಿ ಆಯೋಜಿಸಲಾಗಿತ್ತು. ಕೃಷಿ ವಿಜ್ಞಾನ ಕೇಂದ್ರದ ಗೃಹ ವಿಜ್ಞಾನಿ ಡಾ. ಗೋಪಿಕಾ ಸಿ. ಮುತ್ತಗಿ ಮಾತನಾಡಿ, ಸರಿಯಾದ ಪೋಷಣೆಗೆ ಒತ್ತು ನೀಡುವ ಮೂಲಕ ದೈನಂದಿನ ಜೀವನದಲ್ಲಿ ಜನರು ತೆಗೆದುಕೊಳ್ಳುವ ಆಹಾರದ ಆಯ್ಕೆಗಳು ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯ ಮಾಡಲಿವೆ. ಹೆಚ್ಚಿನ ಹಣ್ಣು ಮತ್ತು ತರಕಾರಿಗಳನ್ನು ಸೇವಿಸುವುದರಿಂದ ಸೂಕ್ಷ್ಮ ಪೋಷಕಾಂಶಗಳ ಕೊರತೆಯನ್ನು ನೀಗಿಸಬಹುದಾಗಿದ್ದು, ಈ ದಿಸೆಯಲ್ಲಿ ಜಾಗೃತಿ ಮೂಡಿಸಲು ರಾಷ್ಟ್ರೀಯ ಪೋಷಣ ಮಾಸಾಚರಣೆ ಕಾರ್ಯಕ್ರಮ  ಹಮ್ಮಿಕೊಳ್ಳಲಾಗಿದೆ ತಿಳಿಸಿದ್ದಾರೆ.

<><><><>

ಪ್ರತಿಷ್ಠಿತ ಅಖಿಲ ಭಾರತ ಜಿ.ವಿ. ಮಾವಲಂಕರ್ ಶೂಟಿಂಗ್ ಸ್ಪರ್ಧೆಯಲ್ಲಿ ಕರ್ನಾಟಕ ಮತ್ತು ಎನ್‌ಸಿಸಿ ನಿರ್ದೇಶನಾಲಯದ ಕೆಡೆಟ್‌ಗಳು ಎರಡು ಚಿನ್ನ,  ೩ ಕಂಚಿನ ಪದಕ ಗೆದ್ದುಕೊಂಡಿದ್ದಾರೆ. ಈ ಮೂಲಕ ಮುಂಬರುವ ರಾಷ್ಟ್ರೀಯ ಶೂಟಿಂಗ್ ಚಾಂಪಿಯನ್‌ಶಿಪ್‌ಗೆ ಅರ್ಹತೆ ಪಡೆದಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>